ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ. 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12**

ಸಂಖ್ಯೆ:ಪಪೂಶಿಇ/ಶೈಶಾ/ಪ್ರ.ಪಿ.ದಾ/2021-22 ದಿನಾಂಕ: -08-2021.

**ಸುತ್ತೋಲೆ**

ವಿಷಯ: 2021-22ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ಮತ್ತು ದ್ವಿತೀಯ ಪಿಯುಸಿ ದಾಖಲಾತಿ ದಿನಾಂಕವನ್ನು ದಂಡ ಶುಲ್ಕವಿಲ್ಲದೆ ವಿಸ್ತರಿಸುವ ಕುರಿತು.

ಉಲ್ಲೇಖ: 1) ಪಪೂಶಿ/ಶೈಶಾ/ಪ್ರ.ಪಿ.ದಾ/2021-22 ದಿನಾಂಕ: 10/08/2021.
2) ಪಪೂಶಿ/ಶೈಶಾ/ಪ್ರ.ಪಿ.ದಾ/2021-22 ದಿನಾಂಕ:13/08/2021.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆ-01 ಮತ್ತು 02ರಲ್ಲಿ 2021-22ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಮತ್ತು ದ್ವಿತೀಯ ಪಿಯುಸಿ ದಾಖಲಾತಿಯನ್ನು ದಂಡ ಶುಲ್ಕವಿಲ್ಲದೆ ದಿನಾಂಕ 31/08/2021 ಹಾಗೂ 28/08/2021ರ ವರೆಗೆ ನಿಗದಿಪಡಿಸಲಾಗಿತ್ತು. ಆದರೆ ರಾಜ್ಯಾದ್ಯಂತ ಪೋಷಕರು, ಪ್ರಾಂಶುಪಾಲರ ಸಂಘದ ಪದಾಧಿಕಾರಿಗಳು, ಸರ್ಕಾರಿ ಮತ್ತು ಅನುದಾನಿತ ಪ್ರಾಂಶುಪಾಲರು ಇನ್ನೂ ಮುಂತಾದವರು ಇಲಾಖೆಯನ್ನು ಸಂಪರ್ಕಿಸಿ ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ದಾಖಲಾತಿಯಾಗಿರುವುದಿಲ್ಲವೆಂದು ತಿಳಿಸಿ ದಂಡ ಶುಲ್ಕವಿಲ್ಲದೆ ದಾಖಲಾತಿ ದಿನಾಂಕವನ್ನು ವಿಸ್ತರಿಸಲು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ದಂಡ ಶುಲ್ಕವಿಲ್ಲದಂತೆ ದಾಖಲಾತಿ ದಿನಾಂಕವನ್ನು ವಿಸ್ತರಿಸಿ ಕೆಳಕಂಡಂತೆ ನೀಡಲಾಗಿದೆ.

**ಪ್ರಥಮ ಮತ್ತು ದ್ವಿತೀಯ ಪಿಯುಸಿ ದಾಖಲಾತಿಯ ವೇಳಾ ಪಟ್ಟಿ**

| ತರಗತಿ | ದಂಡ ಶುಲ್ಕವಿಲ್ಲದೆ ದಾಖಲಾತಿ ಕೊನೆಯ ದಿನಾಂಕ (ಖಜಾನೆಗೆ ಶುಲ್ಕವನ್ನು ಮಾರನೇ ಕಾರ್ಯನಿರತ ದಿನಾಂಕದಂದು ಕಡ್ಡಾಯವಾಗಿ ಪಾವತಿಸುವುದು) | ವಿಳಂಬ ದಾಖಲಾತಿ ರೂ. 670/- (ರೂ. ಆರುನೂರ ಎಪ್ಪತ್ತು ಮಾತ್ರ) ದಂಡ ಶುಲ್ಕದೊಂದಿಗೆ (ಎರಡೂ ದಿನಗಳು ಸೇರಿವೆ)(ಖಜಾನೆಗೆ ಶುಲ್ಕವನ್ನು ಮಾರನೇ ಕಾರ್ಯನಿರತ ದಿನಾಂಕದಂದು ಕಡ್ಡಾಯವಾಗಿ ಪಾವತಿಸುವುದು) | ವಿಶೇಷ ದಂಡ ಶುಲ್ಕ ರೂ. 2890/- (ರೂ 2220/- ಎರಡು ಸಾವಿರದ ಎರಡು ನೂರ ಇಪ್ಪತ್ತು + ರೂ. 670/- ಆರು ನೂರ ಎಪ್ಪತ್ತು ಮಾತ್ರ) ಎರಡೂ ದಿನಗಳು ಸೇರಿವೆ(ಖಜಾನೆಗೆ ಶುಲ್ಕವನ್ನು ಮಾರನೇ ಕಾರ್ಯನಿರತ ದಿನಾಂಕದಂದು ಕಡ್ಡಾಯವಾಗಿ ಪಾವತಿಸುವುದು) |
|---|---|---|---|
| ಪ್ರಥಮ ಪಿಯುಸಿ | **01/09/2021 ರಿಂದ 11/09/2021** | **13/09/2021 ರಿಂದ 25/09/2021** | **27/09/2021ರಿಂದ 05/10/2021** |
| ದ್ವಿತೀಯ ಪಿಯುಸಿ | **30/08/2021 ರಿಂದ 11/09/2021ರ ವರೆಗೆ** | **13/09/2021 ರಿಂದ 25/09/2021** | **27/09/2021ರಿಂದ 05/10/2021** |

2021–22ರ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ ದಾಖಲಾತಿ ಶುಲ್ಕಗಳನ್ನು ಸಂಗ್ರಹಿಸುವುದು. ಈ ರೀತಿ ಸಂಗ್ರಹಿಸಿದ ಶುಲ್ಕಗಳನ್ನು ಸರ್ಕಾರ/ಇಲಾಖೆಗೆ ದಾಖಲಾತಿ ದಿನಾಂಕ ಮುಗಿದ ಮಾರನೇ ಕಾರ್ಯನಿರತ ದಿನಾಂಕದಂದು (ದಂಡ ಶುಲ್ಕವಿಲ್ಲದೆ, ದಂಡ ಶುಲ್ಕ ಹಾಗೂ ವಿಶೇಷ ದಂಡ ಶುಲ್ಕ) ಖಜಾನೆಗೆ ಶುಲ್ಕಗಳನ್ನು ಕಡ್ಡಾಯವಾಗಿ ಜಮೆ ಮಾಡುವುದು. ಈ ಸಂಬಂಧ ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಪೂರ್ಣ ಜವಾಬ್ದಾರರಾಗಿರುತ್ತಾರೆ ಎಂದು ಸೂಚಿಸಿದೆ.

ನಿರ್ದೇಶಕರು

ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಜಿಲ್ಲಾ ಉಪ ನಿರ್ದೇಶಕರ ಮೂಲಕ.
3. ಸಹಾಯಕ ನಿರ್ದೇಶಕರು, ಇ–ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಜಿಲ್ಲಾ ಉಪ ನಿರ್ದೇಶಕರುಗಳ ಇ–ಮೇಲ್‌ಗೆ ಅಳವಡಿಸಲು.
4. ಕಛೇರಿ ಪ್ರತಿ.